**ಬ್ರೆಜಿಲ್ ಅಧ್ಯಕ್ಷರಿಂದ ದೂರವಾಣಿ ಕರೆ ಸ್ವೀಕರಿಸಿದ ಪ್ರಧಾನಿ ನರೇಂದ್ರ ಮೋದಿ (ಆಗಸ್ಟ್ 07, 2025)**

ಆಗಸ್ಟ್ 08, 2025

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಇಂದು (ಆಗಸ್ಟ್ 07, 2025) ಬ್ರೆಜಿಲ್ ಅಧ್ಯಕ್ಷ ಗೌರವಾನ್ವಿತ ಶ್ರೀ ಲೂಯಿಜ್ ಇನಾಸಿಯೋ ಲುಲಾ ಡ ಸಿಲ್ವಾ ಅವರಿಂದ ದೂರವಾಣಿ ಕರೆಯನ್ನು ಸ್ವೀಕರಿಸಿದರು.

ಕಳೆದ ತಿಂಗಳು ಬ್ರೆಜಿಲ್‌ಗೆ ಭೇಟಿ ನೀಡಿದ್ದನ್ನು ಪ್ರಧಾನಮಂತ್ರಿ ಸ್ಮರಿಸಿದರು. ಈ ಸಂದರ್ಭದಲ್ಲಿ ಉಭಯ ನಾಯಕರು ವ್ಯಾಪಾರ, ತಂತ್ರಜ್ಞಾನ, ಇಂಧನ, ರಕ್ಷಣೆ, ಕೃಷಿ, ಆರೋಗ್ಯ ಮತ್ತು ಜನರ ನಡುವಿನ ಸಂಬಂಧಗಳಲ್ಲಿ ಸಹಕಾರವನ್ನು ಬಲಪಡಿಸುವ ಚೌಕಟ್ಟನ್ನು ಒಪ್ಪಿಕೊಂಡಿದ್ದರು.

ಈ ಚರ್ಚೆಗಳ ಸಮಯದಲ್ಲಿ, ಭಾರತ-ಬ್ರೆಜಿಲ್ ಕಾರ್ಯತಂತ್ರದ ಪಾಲುದಾರಿಕೆಯನ್ನು ಹೊಸ ಎತ್ತರಕ್ಕೆ ಕೊಂಡೊಯ್ಯುವ ತಮ್ಮ ಬದ್ಧತೆಯನ್ನು ಅವರು ಪುನರುಚ್ಚರಿಸಿದರು.

ಪರಸ್ಪರ ಹಿತಾಸಕ್ತಿಯ ವಿವಿಧ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಬಗ್ಗೆ ಉಭಯ ನಾಯಕರು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು.

ಉಭಯ ನಾಯಕರು ಸಂಪರ್ಕದಲ್ಲಿರಲು ಒಪ್ಪಿಕೊಂಡರು.

ನವ ದೆಹಲಿ

ಆಗಸ್ಟ್ 07, 2025